**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 366/2025**

**ಚಾ.ಸಾ-2**

**ಪ್ರಾ.ಸಾ-1**

**ಸಾಕ್ಷಿಗೆ ದಿನಾಂಕ 18-12-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಶಂಕರಗೌಡ |
| ತಂದೆಯ ಹೆಸರು | ಃ | ಪೀರಶೆಟ್ಟಿ |
| ವಯಸ್ಸು | ಃ | 27 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಬಣಮಿಗಿ |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ನ್ಯಾಯಾಲಯದ ಮುಂದಿರುವ ಆರೋಪಿ ಗೊತ್ತಿಲ್ಲ. ಚಾಸಾ-1 ಗೊತ್ತಿಲ್ಲ. ಚಾಸಾ-3 ನನಗೆ ಗೊತ್ತು. ಚಾಸಾ-9 ಮತ್ತು 10 ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರ ಕೋರಿಕೆಯ ಮೇರೆಗೆ 5 ತಿಂಗಳ ಹಿಂದೆ ಬಣಮಿಗಿಯಲ್ಲಿ ಸಹಿ ಮಾಡಿರುತ್ತೇನೆ. ನಾನು ಸಹಿ ಮಾಡಿದಂತಹ ದಾಖಲೆಯಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ.

ಸಾಕ್ಷಿಗೆ ಗುನ್ನ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸದರಿ ಗುನ್ನ ಸ್ಥಳದ ಪಂಚನಾಮೆಯನ್ನು ನಿಪಿ-1 ಎಂದು ಸಾಕ್ಷಿ ಸಹಿಯನ್ನು ನಿಪಿ1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಕಚ್ಚಾ ನಕಾಶೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸದರಿ ಕಚ್ಚಾ ನಕಾಶೆಯನ್ನು ನಿಪಿ-2 ಎಂದು ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ 2 ಫೋಟೋಗಳನ್ನು ತೋರಿಸಲಾಗಿ ಅವುಗಳಲ್ಲಿ ತಾನು ಇರುವುದಾಗಿ ನೋಡಿ ಒಪ್ಪಿದ್ದರಿಂದ ಸದರಿ ಫೋಟೋಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು. ಸದರಿ ಫೋಟೊಗಳನ್ನು ಯಾವ ವಿಚಾರವಾಗಿ ತೆಗೆದಿದ್ದಾರೆ ಎಂದು ಗೊತ್ತಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ದಿಃ 19-05-2025 ರಂದು ಬೆಳಿಗ್ಗೆ 10-15 ರಿಂದ 11-15ವರೆಗೆ ಚಾಸಾ-1ರವರು ತೋರಿಸಿದ ಜಾಗದ ಮೇಲೆ ನಿಮ್ಮ ಮತ್ತು ಚಾಸಾ-3ರವರ ಸಮಕ್ಷಮ ಪೋಲಿಸರು ನಿಪಿ-1 ರಂತೆ ಪಂಚನಾಮೆಯನ್ನು ಮಾಡಿ ನಿಪಿ-2 ರಂತೆ ಕಚ್ಚಾ ನಕಾಶೆ ತಯಾರು ಮಾಡಿ ನಿಪಿ-3 ಮತ್ತು 4 ಪೋಟೊ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಚಾಸಾ-9 ಮತ್ತು 10ರವರಿಗೆ ಸೇರಿದ ಬಂಗಾರ ಕಳವು ಆಗಿದೆ ಎಂಬ ವಿಚಾರವಾಗಿ ಪೊಲೀಸರು ಪಂಚನಾಮೆ ಮಾಡಿ ಪೊಟೊ ತೆಗೆದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

ನಿಮಗೆ ಈ ಪ್ರಕರಣದ ಎಲ್ಲ ವಿಚಾರಗಳು ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಆರೋಪಿಳಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರ ಪರವಾಗಿ ಸಾಕ್ಷಿಯ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 366/2025**

**ಚಾ.ಸಾ-3**

**ಪ್ರಾ.ಸಾ-2**

**ಸಾಕ್ಷಿಗೆ ದಿನಾಂಕ 18-12-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಸದ್ದಾಮ್ |
| ತಂದೆಯ ಹೆಸರು | ಃ | ಫಕೀರ್ ಪಟೇಲ್ |
| ವಯಸ್ಸು | ಃ | 28 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಬಣಮಿಗಿ |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ನ್ಯಾಯಾಲಯದ ಮುಂದಿರುವ ಆರೋಪಿ ಗೊತ್ತಿಲ್ಲ. ಚಾಸಾ-1 ಗೊತ್ತಿಲ್ಲ. ಚಾಸಾ-2 ನನಗೆ ಗೊತ್ತಿಲ್ಲ. ಚಾಸಾ-9 ಮತ್ತು 10 ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರ ಕೋರಿಕೆಯ ಮೇರೆಗೆ 4-5 ತಿಂಗಳ ಹಿಂದೆ ಬಣಮಿಗಿಯಲ್ಲಿ ಸಹಿ ಮಾಡಿರುತ್ತೇನೆ. ನಾನು ಸಹಿ ಮಾಡಿದಂತಹ ದಾಖಲೆಯಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ.

ಸಾಕ್ಷಿಗೆ ನಿಪಿ-1 ಗುನ್ನ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಾಕ್ಷಿ ಸಹಿಯನ್ನು ನಿಪಿ1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಕಚ್ಚಾ ನಕಾಶೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಾಕ್ಷಿ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ನಿಪಿ-3 ಮತ್ತು 4 ಪೋಟೋಗಳನ್ನು ತೋರಿಸಲಾಗಿ ಅವುಗಳಲ್ಲಿ ತಾನು ಇರುವುದಾಗಿ ನೋಡಿ ಒಪ್ಪಿಕೊಂಡಿರುತ್ತಾರೆ. ಸದರಿ ಪೋಟೊಗಳನ್ನು ಯಾವ ವಿಚಾರವಾಗಿ ತೆಗೆದಿದ್ದಾರೆ ಎಂದು ಗೊತ್ತಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿಃ 19-05-2025 ರಂದು ಬೆಳಿಗ್ಗೆ 10-15 ರಿಂದ 11-15ವರೆಗೆ ಚಾಸಾ-1ರವರು ತೋರಿಸಿದ ಜಾಗದ ಮೇಲೆ ನಿಮ್ಮ ಮತ್ತು ಚಾಸಾ-2ರವರ ಸಮಕ್ಷಮ ಪೋಲಿಸರು ನಿಪಿ-1 ರಂತೆ ಪಂಚನಾಮೆಯನ್ನು ಮಾಡಿ ನಿಪಿ-2 ರಂತೆ ಕಚ್ಚಾ ನಕಾಶೆ ತಯಾರು ಮಾಡಿ ನಿಪಿ-3 ಮತ್ತು 4 ಪೋಟೊ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಚಾಸಾ-9 ಮತ್ತು 10ರವರಿಗೆ ಸೇರಿದ ಬಂಗಾರ ಕಳವು ಆಗಿದೆ ಎಂಬ ವಿಚಾರವಾಗಿ ಪೊಲೀಸರು ಪಂಚನಾಮೆ ಮಾಡಿ ಪೊಟೊ ತೆಗೆದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

ನಿಮಗೆ ಈ ಪ್ರಕರಣದ ಎಲ್ಲ ವಿಚಾರಗಳು ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಆರೋಪಿಳಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರ ಪರವಾಗಿ ಸಾಕ್ಷಿಯ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತುಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ